**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ,ಹುಣಸೂರು**

**ಸಿಸಿ ನಂ.723/2024**

**ಫಿರ್ಯಾದುದಾರರುಃ** ಸರ್ಕಾರ (ಹುಣಸೂರು ಪಟ್ಟಣ ಪೋಲೀಸರಿಂದ)

-ವಿರುದ್ಧ -

**ಆರೋಪಿತನುಃ** ಕವಿತಾ.,ಕೋಂ ಮಹಾದೇವ, 45 ವರ್ಷ,
ಗೃಹಿಣಿ, ವಾಸಃ ಸುಂಡ್ವಾಲು ಗ್ರಾಮ,
ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಅಭಿಯೋಜನೆಯ ಪರವಾಗಿ ವಿಚಾರಣೆಯಾದ ಸಾಕ್ಷ್ಯಗಳನ್ನು ನೀವು ತಿಳಿದುಕೊಂಡಿರುವಿರಾ? |
| ಉತ್ತರ: | ತಿಳಿದಿದೆ |
| ಪ್ರಶ್ನೆ 2: | ಪಿ.ಡಬ್ಲ್ಯು-1 ಶಿವಶಂಕರ್ ರವರು ತಮ್ಮ ಸಾಕ್ಷ್ಯದಲ್ಲಿ, ಚಾಸಾ.2 ವಸಂತ ಮತ್ತು ಚಾಸಾ.3 ತೇಜಸ್ವಿನಿ ಅವರ ಪತ್ನಿ ಮತ್ತು ಮಗಳಾಗಿದ್ದು, ಅವರಿಗೆ ಚಾಸಾ.4 ವಿನುತಾ ಮತ್ತು ಚಾಸಾ.5 ರವಿನಂದನ್.ಬಿ.ಎಸ್. ಹಾಗೂ ಆರೋಪಿಯಾದ ನೀವು ಗೊತ್ತು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹೌದು |
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 04.03.2024ರಂದು ಮಧ್ಯಾಹ್ನ ಸುಮಾರು 2.00 ಗಂಟೆಗೆ ಆರೋಗ್ಯ ಸರಿ ಇಲ್ಲದೇ ಇದ್ದ ಕಾರಣ ಅವರು ಮನೆಯ ಹಾಲ್ ನಲ್ಲಿ ಮಲಗಿದ್ದು, ಆಗ ಅವರ ಅಣ್ಣನಾದ ಎಸ್.ಮಹದೇವರವರು ಬಂದು, ಅವರ ಆಸ್ತಿ ಮತ್ತು ಸೈಟನ್ನು ತಾಯಿಯಿಂದ ಬರೆಸಿಕೊಂಡಿದ್ದೀಯಾ ಎಂದು ಕೂಗಾಡುತ್ತಾ ಅವರಿಗೆ ಹೊಡೆಯಲು ಬಂದಾಗ ಅವರಿಗೆ ಹೆದರಿಕೆ ಆಗಿ ಮನೆಯಿಂದ ಓಡಿ ಹೊರಗೆ ಹೋಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 4: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಂತರ ಅವರು ಹೊರಗೆ ಬಂದಾಗ ಅಲ್ಲಿ ನಿಂತಿದ್ದ ಅವರ ಅಣ್ಣನ ಹೆಂಡತಿಯಾದ ನೀವು, ನಿಮ್ಮ ಮಗನಾದ ಜಿತೇಂದ್ರ ಮತ್ತು ಮಗಳಾದ ಪ್ರಿಯಾ 3 ಜನರು ಅವರನ್ನು ತಬ್ಬಿಕೊಂಡು ಅಪ್ಪಾ ಇವರನ್ನು ಬಿಡಬೇಡಾ ಹೊಡಿ ಹೊಡಿ ಎಂದು ಹೇಳಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆಗ ಅವರ ಅಣ್ಣ ಎಸ್.ಮಹದೇವ್ ರವರು ಅವರ ತಾಯಿ ನಡೆಯಲು ಬಳಸುತ್ತಿದ್ದ ಊರುಗೋಲನ್ನು ತೆಗೆದುಕೊಂಡು ಅವರ ತಲೆಯ ನೆತ್ತಿಗೆ ಹೊಡೆದರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅವರಿಗೆ ರಕ್ತಗಾಯ ಉಂಟಾಗಿ, ಕಿರುಚಾಡಿದಾಗ ಚಾಸಾ.2 ಮತ್ತು ಚಾಸಾ.3ರವರು ಜಗಳ ಬಿಡಿಸಲು ಬಂದರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆಗ ಅವರಿಗೂ ಕೂಡ ಅವರ ಅಣ್ಣ, ನೀವು ಮತ್ತು ನಿಮ್ಮ ಮಕ್ಕಳು ಕೈಗಳಿಂದ ಹೊಡೆದಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು ಅವರನ್ನು ಉದ್ದೇಶಿಸಿ ನಿನ್ನನ್ನು ಸುಮ್ಮನೆ ಬಿಡುವುದಿಲ್ಲ ಇನ್ನೊಂದು ಸಲ ನಮ್ಮ ವಿಚಾರಕ್ಕೆ ಬಂದರೆ ಕೊಲೆ ಮಾಡುತ್ತೇವೆ ಎಂದು ಪ್ರಾಣ ಬೆದರಿಕೆ ಹಾಕಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 9: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಂತರ ಚಾಸಾ.2 ಮತ್ತು ಚಾಸಾ.3ರವರು ಆಟೋದಲ್ಲಿ ಅವರನ್ನು ಹುಣಸೂರು ಸರ್ಕಾರಿ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿದ್ದು, ಅವರು ಆಸ್ಪತ್ರೆಯಲ್ಲಿದ್ದಾಗ ಪೋಲಿಸರು ಬಂದು ಅವರ ಹೇಳಿಕೆಯನ್ನು ಸಂಜೆ 5 ರಿಂದ 5.30ರ ತನಕ ಪಡೆದುಕೊಂಡರು ಎಂದು, ಹಾಗು ಹೇಳಿಕೆಯನ್ನು ನಿಪಿ-1 ಎಂದು ಅದರಲ್ಲಿ ಅವರ ಸಹಿಯನ್ನು ನಿಪಿ-(ಎ) ಎಂದು ಹಾಗು ನಿಮ್ಮನ್ನು ನೋಡಿ ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 10: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು ಅವರನ್ನು ಹಿಡಿದುಕೊಂಡಿದ್ದು, ನಿಮ್ಮ ಗಂಡ ಹಲ್ಲೆ ಮಾಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 11: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆ ದಿನ ಅವರಿಗೆ ಹಲ್ಲೆ ಮಾಡಲು ಉಪಯೋಗಿಸಿದ ದೊಣ್ಣೆಯನ್ನು ನೋಡಿದರೆ ಗುರುತಿಸುವುದಾಗಿ ಹೇಳಿ, ನ್ಯಾಯಾಲಯದ ಮುಂದಿದ್ದ |

| | |
|---|---|
| | ದೊಣ್ಣೆಯನ್ನು ಮುಮಾ-1 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 12: | ಪಿ.ಡಬ್ಲ್ಯೂ-2 ವಸಂತ ರವರು ತಮ್ಮ ಸಾಕ್ಷ್ಯದಲ್ಲಿ, ಚಾಸಾ.1 ಶಿವಶಂಕರ ಅವರ ಗಂಡ ಮತ್ತು ಚಾಸಾ.3 ತೇಜಸ್ವನಿ ಅವರ ಮಗಳು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 13: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅವರಿಗೆ ಚಾಸಾ.4 ವಿನುತಾ, ಚಾಸಾ.5 ರವಿ ನಂದನ್ ಹಾಗೂ ನೀವು ಗೊತ್ತಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹೌದು |
| ಪ್ರಶ್ನೆ 14: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 04.03.2024ರಂದು ಮಧ್ಯಾಹ್ನ 2.00 ಗಂಟೆಗೆ ಅವರು ಮನೆಯಲ್ಲಿದ್ದಾಗ ಚಾಸಾ.1ರವರು ಹುಷಾರಿಲ್ಲದೇ ಮನೆಯ ಹಾಲ್ ನಲ್ಲಿ ಮಲಗಿದ್ದಾಗ ನೀವು, ಎಸ್ ಮಹದೇವ, ಜಿತೇಂದ್ರ ಮತ್ತು ಪ್ರಿಯಾ ಎಂಬುವವರು ಅವರು ಮನೆಗೆ ಬಂದಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 15: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು, ಎಸ್ ಮಹದೇವ, ಜಿತೇಂದ್ರ ಮತ್ತು ಪ್ರಿಯಾ ಸೈಟ್ ಮತ್ತು ಗದ್ದೆಯನ್ನು ಅತ್ತೆಯಿಂದ ಅವರು ಮತ್ತು ಅವರ ಗಂಡ ಬರೆಸಿಕೊಂಡಿದ್ದಾರೆ ಎಂದು |

| | |
|---|---|
| | ಜಗಳ ಮಾಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 16: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆಗ ಎಸ್ ಮಹದೇವ ಮತ್ತು ಅವರ ಮಗ ಜಿತೇಂದ್ರ ರವರು ಅವರ ಅತ್ತೆ ನಡೆಯಲು ಉಪಯೋಗಿಸುವ ಊರುಗೋಲಿನಿಂದ ಚಾಸಾ.1ರವರ ತಲೆಯ ನೆತ್ತಿಗೆ, ಮೈಕೈಗೆ ಹೊಡೆದಿದ್ದು, ನಂತರ ನೀವೆಲ್ಲರೂ ಹೊರಗೆ ಓಡಿ ಹೋಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 17: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಚಾಸಾ.1ರವರ ತಲೆಗೆ ರಕ್ತಗಾಯವಾಗಿದ್ದು, ಆಗ ಅವರು ಮತ್ತು ಅವರ ಮಗಳು ಚಾಸಾ.3ರವರು ಚಾಸಾ.1ರವರನ್ನು ಹುಣಸೂರು ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 18: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು, ಎಸ್ ಮಹದೇವ, ಜಿತೇಂದ್ರ ಮತ್ತು ಪ್ರಿಯಾ ನೀವೆಲ್ಲರೂ ಹೋಗುವಾಗ ಈಗ ಇಷ್ಟಾಗಿದೆ ಮುಂದೆ ಕೊಲೆ ಮಾಡುತ್ತೇವೆ ಎಂದು ಹೇಳಿ ಹೋಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 19: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 06.03.2024ರಂದು ಪೊಲೀಸರು ಸ್ಥಳ ಪಂಚನಾಮೆ ಮಾಡಲು ಸ್ಥಳಕ್ಕೆ ಬಂದಾಗ ಅವರು ಹಾಜರಿದ್ದು, ಸ್ಥಳ ತೋರಿಸಿದ್ದು, ಆ ಸಮಯದಲ್ಲಿ ಅವರ ಜೊತೆ ಚಾಸಾ.4 ಮತ್ತು ಚಾಸಾ.5ರವರು ಪಂಚರಾಗಿ ಹಾಜರಿದ್ದರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 20: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಮಹಜರನ್ನು ಬೆಳಿಗ್ಗೆ 10 ರಿಂದ 10.30 ರವರೆಗೆ ಮಾಡಿದ್ದು, ಆ ಸಮಯದಲ್ಲಿ ಎಸ್ ಮಹದೇವ ಮತ್ತು ಅವರ ಮಗ ಜಿತೇಂದ್ರ ಇವರು ಚಾಸಾ.1ರವರಿಗೆ ಹಲ್ಲೆ ಮಾಡಲು ಉಪಯೋಗಿಸಿದ ಬಿದಿರು ದೊಣ್ಣೆಯನ್ನು ಅವರು ಮಹಜರು ಸಮಯದಲ್ಲಿ ಪೊಲೀಸರ ಮುಂದೆ ಹಾಜರುಪಡಿಸಿದ್ದು, ಅದನ್ನು ಪೊಲೀಸರು ಅಮಾನತ್ತು ಪಡಿಸಿಕೊಂಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 21: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅವರು ಮು.ಮಾ.1 ರ ಬಿದಿರಿನ ದೊಣ್ಣೆಯನ್ನು ಹಾಗು ನಿಮ್ಮನ್ನು ನೋಡಿ ಹಾಗು ಮಹಜರನ್ನು ನಿಪಿ-2 ಎಂದು, ಅವರ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 22: | ಪಿ.ಡಬ್ಲ್ಯೂ – 3 ತೇಜಸ್ವಿನಿ.ಹೆಚ್.ಎಸ್. ರವರು ತಮ್ಮ ಸಾಕ್ಷ್ಯದಲ್ಲಿ, ಚಾಸಾ.1 ಶಿವಶಂಕರ್ ಅವರ ತಂದೆ ಮತ್ತು ಚಾಸಾ.2 ವಸಂತ ಅವರ ತಾಯಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹೌದು |
| ಪ್ರಶ್ನೆ 23: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅವರಿಗೆ ಚಾಸಾ.4, ಚಾಸಾ.5 ಹಾಗೂ ನೀವು ಗೊತ್ತಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹೌದು |
| ಪ್ರಶ್ನೆ 24: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 04.03.2024ರಂದು ಮಧ್ಯಾಹ್ನ 2.00 ಗಂಟೆಗೆ ಚಾಸಾ.1ರವರು ಹುಷಾರಿಲ್ಲದೇ ಮನೆಯಲ್ಲಿ ಮಲಗಿದ್ದಾಗ ನೀವು, ಜಿತೇಂದ್ರ ಮತ್ತು ಪ್ರಿಯಾ ಅವರ ಮನೆಗೆ ಬಂದಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 25: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು, ಜಿತೇಂದ್ರ ಮತ್ತು ಪ್ರಿಯಾ ಅವರ ಮನೆಗೆ ಬಂದು ಚಾಸಾ.1ರವರನ್ನು ಮನೆಯಿಂದ ಹೊರಗೆ ಕರೆದು, ಕೆಟ್ಟ ಮಾತುಗಳಿಂದ ಬೈದು, ಸೈಟ್ ಹಾಗೂ ಗದ್ದೆಯನ್ನು ನನಗೆ ಗೊತ್ತಿಲ್ಲದ್ದಂತೆ ಬರೆಸಿಕೊಂಡಿದ್ದೀರಿ ಎಂದು ಜಗಳ ಮಾಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 26: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಂತರ ನೀವು, ಜಿತೇಂದ್ರ ಮತ್ತು ಪ್ರಿಯಾ ಅವರ ಅಜ್ಜಿ ನಡೆಯಲು ಉಪಯೋಗಿಸುವ ಊರುಗೋಲಿನಿಂದ ಚಾಸಾ.1ರವರ ತಲೆಯ ನೆತ್ತಿಗೆ, ಮೈಕೈಗೆ ಮತ್ತು ಭುಜಕ್ಕೆ ಹೊಡೆದಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 27: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಹಲ್ಲೆಯಿಂದ ಚಾಸಾ.1ರವರ ನೆತ್ತಿಗೆ ರಕ್ತಗಾಯವಾಗಿದ್ದು, ಚಾಸಾ.1ರವರು ನಿಮ್ಮಿಂದ ಬಿಡಿಸಿಕೊಂಡು ಆಸ್ಪತ್ರೆಗೆ ಹೋಗಲು ಬಂದರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 28: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆಗ ಅವರು ಚಾಸಾ.1ರವರನ್ನು ಹುಣಸೂರು ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 29: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು, ಜಿತೇಂದ್ರ ಮತ್ತು ಪ್ರಿಯಾ ಚಾಸಾ.1ರವರಿಗೆ ಈಗ ತಪ್ಪಿಸಿಕೊಂಡಿದ್ದೀಯಾ ಇನ್ನೊಮ್ಮೆ ಬಂದಾಗ ಸಾಯಿಸುತ್ತೇನೆ ಎಂದು ಕೊಲೆ ಬೆದರಿಕೆ ಹಾಕಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ30: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು ಚಾಸಾ.1ರವರಿಗೆ ಹಲ್ಲೆ ಮಾಡಲು ಉಪಯೋಗಿಸಿದ ದೊಣ್ಣೆಯನ್ನು ನೋಡಿದರೆ ಗುರುತಿಸುವುದಾಗಿ ಹೇಳಿ ಮುಮಾ-1ರ ದೊಣ್ಣೆಯನ್ನು ಹಾಗು ನಿಮ್ಮನ್ನು ನೋಡಿ ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ31: | ಪಿಡಬ್ಲ್ಯು-4 ರವಿ ನಂದನ್ ರವರು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 06.03.2023ರಂದು ಕಲ್ಲುಣಿಕೆಯ ಜವರೇಗೌಡರ ಬೀದಿಯಲ್ಲಿ ಅವರ ಚಿಕ್ಕಪ್ಪನಿಗೆ ಹೊಡೆದ ಬಗ್ಗೆ ಪೋಲಿಸರು ಮಹಜರು ಮಾಡಿದಾಗ ನಿಪಿ-2ಕ್ಕೆ ಸಹಿ ಹಾಕಿರುವುದಾಗಿ ಹಾಗು ಅವರ ಸಹಿಯನ್ನು ನಿಪಿ-2ಬಿ ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಹೌದು |
| ಪ್ರಶ್ನೆ32: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಮಹಜರು ಸಮಯದಲ್ಲಿ ಚಾಸಾ.2ರವರ ಜೊತೆ ಚಾಸಾ.4ರವರು ಸಹ ಹಾಜರಿದ್ದು, ಚಾಸಾ.2ರವರು ಪೋಲೀಸರಿಗೆ ಸ್ಥಳ ತೋರಿಸಿದರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ33: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಿಪಿ.2 ಸ್ಥಳ ಮಹಜರ್ ನ್ನು ಬೆಳಿಗ್ಗೆ 10.00 ರಿಂದ 10.30ರವರೆಗೆ ಮಾಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 34: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಮಹಜರ್ ಮಾಡುವ ಸಮಯದಲ್ಲಿ ಪೊಲೀಸರು ಮು.ಮಾ.1 ರ ದೊಣ್ಣೆಯನ್ನು ಅಮಾನತ್ತುಪಡಿಸಿಕೊಂಡಿರುವುದಾಗಿ ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 35: | ಪಿ.ಡಬ್ಲ್ಯೂ – 5 ಡಾ.ಟಿ.ಗುರುಮಲ್ಲಪ್ಪ, ಹುಣಸೂರು ಪಟ್ಟಣ ಸಾರ್ವಜನಿಕ ಆಸ್ಪತ್ರೆಯ ಸ್ತ್ರೀರೋಗ ತಜ್ಞರು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 04.03.2024ರಂದು ಮಧ್ಯಾಹ್ನ 3.00 ಕ್ಕೆ ಚಾಸಾ.1ರವರು ಹಲ್ಲೆಗೆ ಒಳಗಾದ ಹಿನ್ನಲೆಯಲ್ಲಿ ಅವರ ಮುಂದೆ ಚಿಕಿತ್ಸೆಗೆ ಹಾಜರಾಗಿದ್ದರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 36: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅವರು ಚಾಸಾ.1ರವರನ್ನು ಪರೀಕ್ಷಿಸಿದಾಗ ಅವರ ತಲೆಯ ಮುಂಭಾಗದ ಬಲಭಾಗದಲ್ಲಿ 4 x 0.5 ಸೆಂಟಿ ಮೀಟರ್ ಅಳತೆಯ ರಕ್ತ ಸ್ರಾವದಿಂದ ಕೂಡಿದ ತರಚಿದ ಗಾಯ ಮತ್ತು ಎಡತೋಳಿನ ಕೆಳಭಾಗದಲ್ಲಿ ನೋವಿತ್ತು ಎಂದು ತಿಳಿಸಿರುವುದಾಗಿ, ಹಾಗು ಅದನ್ನು ಪರೀಕ್ಷಿಸಿ ಖಚಿತಪಡಿಸಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 37: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಚಾಸಾ.1ರವರು ದಿನಾಂಕಃ 04.03.2024ರಿಂದ 07.03.2024ರವರೆಗೆ ಒಳರೋಗಿಯಾಗಿ ದಾಖಲಾಗಿದ್ದರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |

| | |
|---|---|
| ಉತ್ತರ: | ಸುಳ್ಳು |
| ಪ್ರಶ್ನೆ 38: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಂತರ ಅವರು ಚಾಸಾ.1ರವರನ್ನು ಸಾಮಾನ್ಯ ಶಸ್ತ್ರ ಚಿಕಿತ್ಸಕರ ಬಳಿ ರೆಫರ್ ಮಾಡಿದ್ದು, ಸದರಿಯವರು ಚಾಸಾ.1ರವರಿಗೆ ತಲೆಗೆ ನೋವಾಗಿರಬಹುದು ಎಂದು ಅಭಿಪ್ರಾಯ ಪಟ್ಟು ಸಿಟಿ ಸ್ಕ್ಯಾನ್ ತೆಗೆಸುವ ಸಲುವಾಗಿ ಕೆ.ಆರ್.ಆಸ್ಪತ್ರೆಗೆ ಮೈಸೂರಿಗೆ ಕಳುಹಿಸಿದ್ದು, ಆದರೆ ಚಾಸಾ.1ರವರು ಕೆ.ಆರ್.ಆಸ್ಪತ್ರೆಗೆ ಹೋಗಿಲ್ಲ ಮತ್ತು ಸಿಟಿ ಸ್ಕ್ಯಾನ್ ಮಾಡಿಸಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 39: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅವರ ಅಭಿಪ್ರಾಯದಲ್ಲಿ ಚಾಸಾ.1ರವರಿಗೆ ಆದ ಗಾಯಗಳು ಸಾಮಾನ್ಯ ಸ್ವರೂಪದ ಗಾಯಗಳಾಗಿದ್ದು, ಅದರ ಬಗ್ಗೆ ಅವರು ನಿಪಿ-3ರಂತೆ ಗಾಯದ ಪ್ರಮಾಣ ಪತ್ರವನ್ನು ನೀಡಿರುವುದಾಗಿ ಹಾಗು ಅದರಲ್ಲಿ ಅವರ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 40: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಒಬ್ಬ ವ್ಯಕ್ತಿಗೆ ಮು.ಮಾ.1 ರ ದೊಣ್ಣೆಯಿಂದ ಹಲ್ಲೆ ಮಾಡಿದರೆ ನಿಪಿ.3ರಲ್ಲಿ ಕಾಣಿಸಿದ ಗಾಯಗಳು ಆಗುವ ಸಾಧ್ಯತೆ ಇದೆ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 41: | ಪಿ.ಡಬ್ಲ್ಯೂ - 6 ನಂಜ, ಹುಣಸೂರು ಪಟ್ಟಣ ಠಾಣೆಯ ಎ.ಎಸ್.ಐ., ರವರು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ ದಿನಾಂಕಃ 04.03.2024ರಂದು |

| | |
|---|---|
| | ಈ ಪ್ರಕರಣದ ಕಡತವನ್ನು ಚಾಸಾ.7ರವರಿಂದ ಸ್ವೀಕರಿಸಿ ಕಡತವನ್ನು ಪರಿಶೀಲಿಸಿ ಈ ಪ್ರಕರಣ ಅವರ ಠಾಣೆಯ ಮೊಕದ್ದಮೆ ಸಂಃ85/2024ಕ್ಕೆ ಪ್ರತಿ ಪ್ರಕರಣವಾಗಿದ್ದರಿಂದ ಎರಡು ಪ್ರಕರಣದ ತನಿಖೆಯನ್ನು ಒಬ್ಬರೇ ತನಿಖಾಧಿಕಾರಿ ಮಾಡಬೇಕಾಗಿದ್ದ ಕಾರಣ ತನಿಖೆಯನ್ನು ಮುಂದುವರೆಸಿ ನಿಮಗೆ ದಂಡ ಪ್ರಕ್ರಿಯೆ ಸಂಹಿತೆ ಕಲಂ. 41ರಡಿಯಲ್ಲಿ ನೋಟೀಸನ್ನು ಜಾರಿ ಮಾಡಿದ್ದು, ಸದರಿ ನೋಟೀಸನ್ನು ನಿಪಿ.4 ಎಂದು ಮತ್ತು ಅದರಲ್ಲಿರುವ ಅವರ ಸಹಿಯನ್ನು ನಿಪಿ.4(ಎ) ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 42: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 17.04.2024ರಂದು ಈ ಪ್ರಕರಣದ ಕೈಬಿಟ್ಟ ಆರೋಪಿಯಾದ ಮಹದೇವರವರು ಕೃತ್ಯ ನಡೆದ ದಿನ ಅವರು ಕರ್ತವ್ಯದಲ್ಲಿದ್ದ ಬಗ್ಗೆ ತಿಳಿಸಿದ್ದರಿಂದ ಕರ್ತವ್ಯ ದೃಢೀಕರಣ ಪತ್ರವನ್ನು ನೀಡುವಂತೆ ಸರ್ಕಾರಿ ಪದವಿಪೂರ್ವ ಕಾಲೇಜು, ಹುಣಸೂರಿನ ಪ್ರಾಂಶುಪಾಲರಿಗೆ ಮನವಿಯನ್ನು ಸಲ್ಲಿಸಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 43: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 03.05.2024ರಂದು ಸದರಿ ಕೈಬಿಟ್ಟ ಆರೋಪಿಯಾದ ಮಹದೇವರವರರು ಕರ್ತವ್ಯ ದೃಢೀಕರಣ ಪತ್ರವನ್ನು ಅವರ ಮುಂದೆ ಹಾಜರುಪಡಿಸಿದ್ದು, ಅದನ್ನು ಸ್ವೀಕರಿಸಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |

| | |
|---|---|
| ಉತ್ತರ: | ಸುಳ್ಳು |
| ಪ್ರಶ್ನೆ 44: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 27.05.2024ರಂದು ಹುಣಸೂರು ಸರ್ಕಾರಿ ಆಸ್ಪತ್ರೆಯಿಂದ ನಿಪಿ-3ರ ಗಾಯದ ಪ್ರಮಾಣ ಪತ್ರವನ್ನು ಸ್ವೀಕರಿಸಿದ್ದು, ಅದರಲ್ಲಿ ಅವರ ಸಹಿಯನ್ನು ನಿಪಿ.3(ಬಿ) ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 45: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನೀವು ಅವರ ಮುಂದೆ ಹಾಜರಾದ ಮೇರೆಗೆ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುವುದಾಗಿ ಹಾಗು ನಿಮ್ಮನ್ನು ನೋಡಿ ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 46: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 13.06.2024ರಂದು ತನಿಖೆಯನ್ನು ಮುಂದುವರಿಸಿ ಆರೋಪಿಯಾದ ನಿಮ್ಮ ವಿರುದ್ದ ಆರೋಪ ಸಾಬೀತಾದ ಮೇರೆಗೆ ಉಳಿದ ಇಬ್ಬರನ್ನು ಕೈ ಬಿಟ್ಟು ನಿಮ್ಮ ವಿರುದ್ಧ ದೋಷಾರೋಪಣಾ ಪತ್ರವನ್ನು ಸಲ್ಲಿಸಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 47: | ಪಿ.ಡಬ್ಲ್ಯೂ-7 ಕುಮಾರ್, ಹುಣಸೂರು ಪಟ್ಟಣ ಪೊಲೀಸ್ ಠಾಣೆಯ ಎ.ಎಸ್.ಐ., ರವರು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 04.03.2024ರಂದು ಅವರು ಠಾಣಾ ಪ್ರಭಾರದಲ್ಲಿದ್ದಾಗ ಸಂಜೆ 5 |

| | |
|---|---|
| | ಗಂಟೆಗೆ ಹುಣಸೂರು ಆಸ್ಪತ್ರೆಯಿಂದ ಮೆಮೊ ಬಂದಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 48: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಮೆಮೋ ಪ್ರಕಾರ ಅವರು ಹುಣಸೂರು ಸರ್ಕಾರಿ ಆಸ್ಪತ್ರೆಗೆ ಭೇಟಿ ಕೊಟ್ಟು, ಮೊದಲನೇ ಮಹಡಿಯ ವಾರ್ಡ್ ನಲ್ಲಿ ಚಿಕಿತ್ಸೆಗೆ ದಾಖಲಾಗಿದ್ದ ಚಾಸಾ.1ರವರ ಹೇಳಿಕೆಯನ್ನು ಸಂಜೆ 5 ರಿಂದ 5.45 ರವರೆಗೆ ನಿಪಿ-1ರಂತೆ ಪಡೆದು, ನಂತರ ಠಾಣೆಗೆ ವಾಪಸ್ಸಾಗಿ ಸಂಜೆ 5.55 ಗಂಟೆಗೆ ಪ್ರಕರಣ ದಾಖಲಿಸಿ ನಿಪಿ-5ರಂತೆ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುವುದಾಗಿ ಹಾಗು ನಿಪಿ-1 ಮತ್ತು ನಿಪಿ-5ರಲ್ಲಿ ಅವರ ಸಹಿಗಳನ್ನು ನಿಪಿ-1(ಬಿ) ಮತ್ತು ನಿಪಿ-5(ಎ) ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 49: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 06.03.2024ರಂದು ಮಹಜರಿಗೆ ಹಾಜರಾಗುವಂತೆ ಚಾಸಾ.2 ಮತ್ತು ಚಾಸಾ.5ರವರಿಗೆ ನಿಪಿ-6 ಮತ್ತು ನಿಪಿ-7ರಂತೆ ನೋಟೀಸ್ ಜಾರಿ ಮಾಡಿರುವುದಾಗಿ ಹಾಗು ಅದರಲ್ಲಿ ಅವರ ಸಹಿಗಳನ್ನು ನಿಪಿ-6(ಎ) ಮತ್ತು ನಿಪಿ-7(ಎ) ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 50: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಂತರ ಅದೇ ದಿನ ಅವರು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ಕೊಟ್ಟಿದ್ದು, ಆ ಸಮಯದಲ್ಲಿ ಸ್ಥಳದಲ್ಲಿ ಚಾಸಾ.2ರವರು ಹಾಜರಿದ್ದು, ಅವರು ಸ್ಥಳ ತೋರಿಸಿದ ಮೇರೆಗೆ ಪಂಚರಾದ ಚಾಸಾ.4 ಮತ್ತು ಚಾಸಾ.5ರವರ ಸಮಕ್ಷಮ ಬೆಳಿಗ್ಗೆ 10 ರಿಂದ 10.30ರವರೆಗೆ ನಿಪಿ-2ರಂತೆ ಸ್ಥಳ ಮಹಜರು ಕ್ರಮ ಜರುಗಿಸಿರುವುದಾಗಿ ಹಾಗು ಅದರಲ್ಲಿ ಅವರ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 51: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಮಹಜರು ಸಮಯದಲ್ಲಿ 3 ಅಡಿ ಉದ್ದದ 3 ಬೆರಳು ಗಾತ್ರದ ಒಂದು ಬಿದಿರಿನ ದೊಣ್ಣೆಯನ್ನು ಚಾಸಾ.2ರವರು ಹಾಜರುಪಡಿಸಿದ್ದು, ಅದನ್ನು ಅಮಾನತ್ತುಪಡಿಸಿಕೊಂಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 52: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಂತರ ಠಾಣೆಗೆ ವಾಪಸ್ಸಾಗಿ ಬಿದಿರಿನ ದೊಣ್ಣೆಯನ್ನು ಮಾಲುಪಟ್ಟಿಯಲ್ಲಿ ನಮೂದಿಸಿ ನ್ಯಾಯಾಲಯದ ಆದೇಶಕ್ಕಾಗಿ ನಿವೇದಿಸಿಕೊಂಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 53: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಂತರ ಅದೇ ದಿನ ಚಾಸಾ.1ರವರ ಮರುಹೇಳಿಕೆಯನ್ನು ಮತ್ತು ಚಾಸಾ2ರವರ ಹೇಳಿಕೆಯನ್ನು ದಾಖಲಿಸಿಕೊಂಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 54: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ನಂತರ ಚಾಸಾ.1 ರಿಂದ ಚಾಸಾ.3ರವರಿಂದ ವಿಚಾರಣೆಯ ಬಾಂಡ್‌ಗಳನ್ನು ಪಡೆದುಕೊಂಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 55: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ದಿನಾಂಕಃ 28.03.2024ರಂದು ಚಾಸಾ.1ರವರು ದಾಖಲಾಗಿದ್ದ ಆಸ್ಪತ್ರೆಯಿಂದ ಗಾಯದ ಪ್ರಮಾಣ ಪತ್ರವನ್ನು ನೀಡುವಂತೆ ನಿಪಿ-8ರಂತೆ ಕೋರಿಕಾ ಪತ್ರವನ್ನು ಸಲ್ಲಿಸಿರುವುದಾಗಿ ಹಾಗು ಅದರಲ್ಲಿ ಅವರ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 56: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ತದನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ.8ರವರಿಗೆ ಹಸ್ತಾಂತರಿಸಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 57: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅವರು ಅಮಾನತ್ತುಪಡಿಸಿಕೊಂಡ ಮು.ಮಾ.1 ಬಿದಿರಿನ ದೊಣ್ಣೆಯನ್ನು ನೋಡಿ ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 58: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇಲ್ಲ |
| ಪ್ರಶ್ನೆ 59: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇಲ್ಲ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 02.06.2026.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ